# ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇ-1

ಸಂಖ್ಯೆ: .ED/KEA/ADMN/CR-06/2015-16 ದಿನಾಂಕ: 18.10.2019

## ಅಧಿಸೂಚನೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 17.01.2019ರಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ದಿನಾಂಕ 05.03.2019 ರಂದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ನೇಮಕಾತಿಗೆ 25 % ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿತ್ತು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ದಿನಾಂಕ 22.07.2019 ರ ಪತ್ರದಲ್ಲಿ ಹೈದರಬಾದ್ ಕರ್ನಾಟಕ ಪ್ರದೇಶದ ಹುದ್ದೆಗಳಿಗೆ, ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳು ನೇಮಕಾತಿಯಲ್ಲಿ ವಂಚಿತರಾಗುವುದನ್ನು ತಪ್ಪಿಸಲು, ಈಗಾಗಲೆ ಪ್ರಕಟಿಸಿದ 25 % ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಹಿಂಪಡೆದು, ಹೈದರಬಾದ್ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಖಾಲಿ ಉಳಿದಿರುವ ಹುದ್ದೆಗಳಿಗೆ ಮಾತ್ರ ಆಯ್ಕೆ ಪಟ್ಟಿಯನ್ನು ಸಿದ್ದ ಪಡಿಸುವಂತೆ ಕೋರಿದ್ದು, ಈ ಬಗ್ಗೆ ಪ್ರಾಧಿಕಾರವು ಸಿಆಸು ಇಲಾಖೆಯ (ಹೈ-ಕ ವಿಶೇಷ ಕೋಶ) ಅಭಿಪ್ರಾಯ ಕೋರಲಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ತಮ್ಮ ಪತ್ರದಲ್ಲಿ ಕೋರಿರುವಂತೆ ಕ್ರಮ ಜರುಗಿಸಲು ಸಿಆಸು ಇಲಾಖೆಯ ಕಾರ್ಯದರ್ಶಿಗಳು ತಮ್ಮ ಪತ್ರ ದಿನಾಂಕ 09.10.2019ರಲ್ಲಿ ನಿರ್ದೇಶನ ನೀಡಿರುತ್ತಾರೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ನೇಮಕಾತಿಗೆ ದಿನಾಂಕ 17.01.2019 ಮತ್ತು 05.03.2019 ರಂದು ಪ್ರಕಟಿಸಿದ 25 % ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿ, ಬಳ್ಳಾರಿ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಪ್ರಕಟಿಸಲಾದ ಹೆಚ್ಚುವರಿ ಪಟ್ಟಿಯನ್ನು ಈ ಮೂಲಕ ಹಿಂದಕ್ಕೆ ಪಡೆಯಲಾಗಿದೆ. ಸದರಿ ಜಿಲ್ಲೆಗಳಲ್ಲಿ ಪಿ.ಡಿ.ಒ ಮತ್ತು ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇ-1 ಹುದ್ದೆಗಳ ಮುಖ್ಯ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಪೈಕಿ ಕರ್ತವ್ಯಕ್ಕೆ ಹಾಜರಾಗದೆ ಖಾಲಿ ಇರುವ ಹುದ್ದೆಗಳಿಗೆ ಮಾತ್ರ ಜೇಷ್ಠತೆ ಮತ್ತು ಮೀಸಲಾತಿಯನ್ನು ಆಧಾರವಾಗಿ ಇಟ್ಟುಕೊಂಡು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಸಿದ್ದ ಪಡಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನೀಡಲಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ